# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 891

ಮಾನ್ಯ ಸದಸ್ಯರ ಹೆಸರು : ಡಾ|| ಚಂದ್ರಶೇಖರ ಬಿ.ಪಾಟೀಲ್ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 28.09.2020

ಉತ್ತರಿಸುವ ಸಚಿವರು : ಪ್ರಾಥಮಿಕ & ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರಿ ಶಾಲಾ ಸಿಬ್ಬಂದಿಗೆ ನೀಡುವ ಜ್ಯೋತಿ ಸಂಜೀವಿನಿ ಆರೋಗ್ಯ ಸೌಲಭ್ಯವನ್ನು ಅನುದಾನಿತ ಶಾಲಾ ಸಿಬ್ಬಂದಿಗೆ ಒದಗಿಸುವ ಬಗ್ಗೆ ಸರ್ಕಾರದ ಸ್ಪಷ್ಟ ನಿಲುವೇನು? | ಅನುದಾನಿತ ಶಾಲಾ ಕಾಲೇಜುಗಳ ನೌಕರರು ಕರ್ನಾಟಕ ಶಿಕ್ಷಣ ಅಧಿನಿಯಮ, 1983 ಮತ್ತು ಅದರಡಿ ರಚಿಸಲ್ಪಟ್ಟ ಕರ್ನಾಟಕ ಶಿಕ್ಷಣ ಸಂಸ್ಥೆಗಳ (Classification, Regulation and Prescrition of Curricula) ನಿಯಮಗಳು, 1995ರ ವ್ಯಾಪ್ತಿಗೆ ಒಳಪಡುತ್ತಾರೆ. ಇವರನ್ನು ಸರ್ಕಾರಿ ನೌಕರರೆಂದು ಪರಿಗಣಿಸಲಾಗುವುದಿಲ್ಲ. ಆದುದರಿಂದ ಅವರಿಗೆ ಜ್ಯೋತಿ ಸಂಜೀವಿನಿ ಯೋಜನೆ ಅನ್ವಯವಾಗುವುದಿಲ್ಲ.<br><br>ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಕರ್ನಾಟಕ ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963ರ ವ್ಯಾಪ್ತಿಗೆ ಒಳಪಡುವುದಿಲ್ಲ, ಆದುದರಿಂದ ಇವರು ಜ್ಯೋತಿ ಸಂಜೀವಿನಿ ಸೌಲಭ್ಯಕ್ಕೆ ಅರ್ಹರಿರುವುದಿಲ್ಲ ಹಾಗೂ ಕರ್ನಾಟಕ ಶಿಕ್ಷಣ ಸಂಸ್ಥೆಗಳು(ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ ಮತ್ತು ಸೇವಾ ಷರತ್ತು ಹಾಗೂ ನಿಬಂಧನೆಗಳು) ನಿಯಮಗಳು 1999ರ ಅನುಬಂಧ -ii (3) ರನ್ವಯ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಕ್ಕೂ ಅರ್ಹರಿರುವುದಿಲ್ಲ. |

ಸಂ:ಇಪಿ284ಎಸ್ ಇ ಎಸ್2020

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು